# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ಕಾರ್ಯಾಲಯಕ್ಕೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಪತ್ರ ಸಂಖ್ಯೆ: ಬೆಂ.ದ.ತಾ.ಪಂ/ ಲೆಕ್ಕ ಶಾಖೆ/14/2014-15 ದಿನಾಂಕ 11.09.2014 ಕ್ಕೆ ಕೊನೆಗೊಂಡ ಪತ್ರ ವ್ಯವಹಾರ.

:-:

**ಪ್ರಸ್ತಾವನೆ:**

ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ಇವರು ಮೇಲೆ ಓದಲಾದ ದಿನಾಂಕ 11.09.2014 ರ ಪತ್ರದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಉಪಯೋಗಕ್ಕಾಗಿ ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 01 ಜಿ 2858 ಅನುಪಯುಕ್ತವಾಗಿರುವ ಕಾರಣ. ಹೊಸ ವಾಹನವನ್ನು ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿಯ ಲೆಕ್ಕ ಶೀರ್ಷಿಕೆ "8448-00-109-7-00 (ಯೋಜನೇತರ)" ಅಡಿಯಲ್ಲಿ 2014-15ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೆಂಗಳೂರು (ದಕ್ಷಿಣ) ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 341 ಕೆಎಸ್ಎಸ್ 2014 ಬೆಂಗಳೂರು**
**ದಿನಾಂಕ 28.03.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಉಪಯೋಗಕ್ಕಾಗಿ ಲೆಕ್ಕ ಶೀರ್ಷಿಕೆ "8448-00-109-7-00 (ಯೋಜನೇತರ)" 2014-15ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಹೊಸ ವಾಹನವನ್ನು ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 111 ಶಿವಾನೀ 2011 ದಿನಾಂಕ 9.5.2013 ರಲ್ಲಿ ಇಲಾಖಾ ಮುಖ್ಯಸ್ಥರಿಗೆ ವಾಹನ ಖರೀದಿಗಾಗಿ ನಿಗದಿಪಡಿಸಿರುವ ರೂ. 6.5 ಲಕ್ಷಗಳ (ಆರುವರೆ ಲಕ್ಷ ರೂಪಾಯಿಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.
2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.

3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
4. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 226 ವೆಚ್ಚ-6/2015 ದಿನಾಂಕ 27.3.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಲೀಲಾವತಿ)
ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೆಂಗಳೂರು (ದಕ್ಷಿಣ)
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಬೆಂಗಳೂರು ನಗರ.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ನಗದು ಶಾಖೆ (ಸೇವೆಗಳು-ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.